ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ–೧೭**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಇಪ್ಪತ್ತೇಳನೇ ಅಧಿವೇಶನ**
**(ಮುಂದುವರೆದ ಉಪವೇಶನ)**
**ಬುಧವಾರ, ದಿನಾಂಕ: ೨೫ನೇ ಮಾರ್ಚ್, ೨೦೧೫**

---

**ಸಮೂಹ – III**

೧. ಅರಣ್ಯ ಸಚಿವರು

೨. ಕಂದಾಯ ಸಚಿವರು

೩. ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು

೪. ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

೫. ಸಣ್ಣ ನೀರಾವರಿ ಸಚಿವರು

೬. ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು

೭. ಕಾರ್ಮಿಕ ರಾಜ್ಯ ಸಚಿವರು

---

## ಕಾವೇರಿ ನೀರಾವರಿ ನಿಗಮದಲ್ಲಿ ತುಂಡು ಗುತ್ತಿಗೆ ಕಾಮಗಾರಿ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) –**

೨೪೧ (೨೪೪೦) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಾವೇರಿ ನೀರಾವರಿ ನಿಗಮದ ವ್ಯಾಪ್ತಿಯಲ್ಲಿ ಕಳೆದ ಎರಡು ವರ್ಷಗಳಲ್ಲಿ ತುಂಡು ಗುತ್ತಿಗೆ ಆಧಾರದ ಮೇಲೆ (ತಲಾ ರೂ. ೫.೦೦ ಲಕ್ಷಗಳೊಳಗೆ) ಎಷ್ಟು ಕಾಮಗಾರಿಗಳಿಗೆ ಮಂಜೂರಾತಿ ನೀಡಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಾಮಗಾರಿಗಳ ಒಟ್ಟು ಮೊತ್ತವೆಷ್ಟು; ಕಾಮಗಾರಿಗಳು ಯಾವ ಅಧಿಕಾರಿಗಳಿಂದ ಅನುಮೋದನೆಗೊಂಡಿವೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಸದರಿ ಕಾಮಗಾರಿಗಳನ್ನು ಯಾವ ಗುತ್ತಿಗೆದಾರರಿಗೆ ನೀಡಲಾಗಿದೆ; ಮುಕ್ತಾಯಗೊಂಡಿರುವ ಕಾಮಗಾರಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಸದರಿ ಕಾಮಗಾರಿಗಳಿಗೆ ಅನುಮೋದನೆ ನೀಡುವಲ್ಲಿ ಅನುಸರಿಸಿರುವ ಮಾರ್ಗಸೂಚಿಗಳು ಹಾಗೂ ಸರ್ಕಾರದ ನಿಯಮಗಳೇನು? (ಪೂರ್ಣ ವಿವರ ನೀಡುವುದು)

## ರೇಖಲಗೆರೆ ಫೀಡರ್ ಚಾನಲನ್ನು ದುರಸ್ತಿಗೊಳಿಸುವ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೨೪೨ (೨೪೨೭) ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಚಿತ್ರದುರ್ಗ ಜಿಲ್ಲೆ, ಚಳ್ಳಕೆರೆ ತಾ. ರೇಖಲಗೆರೆ ಫೀಡರ್ ಚಾನಲನ್ನು ಯಾವ ವರ್ಷದಲ್ಲಿ ನಿರ್ಮಿಸಲಾಗಿದೆ;

(ಆ) ಸದರಿ ಚಾನಲ್‌ನಿಂದ ಎಷ್ಟು ಕೆರೆಗಳಿಗೆ ನೀರನ್ನು ಒದಗಿಸಲಾಗಿದೆ;

(ಇ) ಸದರಿ ಚಾನಲ್‌ನ ಈಗಿನ ಸ್ಥಿತಿಗತಿ ಹೇಗಿದೆ;

(ಈ) ಸದರಿ ಚಾನಲನ್ನು ದುರಸ್ತಿಗೊಳಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ;

(ಉ) ಸದರಿ ಚಾನಲನ್ನು ಈವರೆಗೆ ಎಷ್ಟು ಬಾರಿ ದುರಸ್ತಿಗೊಳಿಸಲಾಗಿದೆ; ದುರಸ್ತಿಗೊಳಿಸಿದ್ದಲ್ಲಿ, ನಿರ್ವಹಣೆಗಾಗಿ ಕಳೆದ ೫ ವರ್ಷಗಳಲ್ಲಿ ಖರ್ಚು ಮಾಡಲಾದ ಮೊತ್ತವೆಷ್ಟು ?

## ಸರ್ವೆ ಇಲಾಖೆಯಲ್ಲಿ ಬಾಕಿ ಇರುವ ಸ್ಕ್ಯಾನಿಂಗ್ ಕಾರ್ಯ ಕುರಿತು

**ಶ್ರೀ ಮೃತ್ಯಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೪೩ (೨೪೨೨) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೀದರ್ ಜಿಲ್ಲೆಯ ಸರ್ವೆ ಇಲಾಖೆಯಲ್ಲಿ ಇನ್ನೂ ಎಷ್ಟು ತಾಲ್ಲೂಕಿನಲ್ಲಿ ಸ್ಕ್ಯಾನಿಂಗ್ ಕಾರ್ಯ ಬಾಕಿ ಇದೆ; ಎಷ್ಟು ಕಡೆ ಸ್ಕ್ಯಾನಿಂಗ್ ಕಾರ್ಯ ಮುಕ್ತಾಯವಾಗಿದೆ;

(ಆ) ಸ್ಕ್ಯಾನಿಂಗ್ ಕಾರ್ಯ ಮುಕ್ತಾಯವಾಗಿರುವ ಕಡೆ ಸರ್ವೆ ಕಿಯಾಸ್ಕ್ ಕೇಂದ್ರ ಪ್ರಾರಂಭಿಸಲು ಇರುವ ಸಮಸ್ಯೆ ಏನು;

(ಇ) ಈ ಹಿಂದೆ ಸಂಡೂರಿನಲ್ಲಿ ಕಿಯಾಸ್ಕ್ ಕೇಂದ್ರ ಪ್ರಾರಂಭವಾಗಿದ್ದು, ತದನಂತರ ಕೇವಲ ೪೨೦ ದಾಖಲೆಗಳನ್ನು ನೀಡಿ ಕಳೆದ ಸುಮಾರು ೩ ವರ್ಷದಿಂದ ಸ್ಥಗಿತಗೊಂಡಿದೆ, ಇದಕ್ಕೆ ಸರ್ಕಾರ ಏನು ಕ್ರಮ ಕೈಗೊಳ್ಳಲಿದೆ;

(ಈ) ಜಿಲ್ಲೆಯಲ್ಲಿ ಹೈದ್ರಾಬಾದ್–ಕರ್ನಾಟಕ ದೃಢೀಕರಣ ಪತ್ರ ನೀಡುವಲ್ಲಿ ಅನೇಕ ಗೊಂದಲಗಳಿದ್ದು, ನಿಗದಿತ ಅವಧಿಯೊಳಗೆ ದೃಢೀಕರಣ ಪತ್ರ ದೊರೆಯದೇ ಸಾರ್ವಜನಿಕರು, ವಿದ್ಯಾರ್ಥಿಗಳು ತೊಂದರೆಗೊಳಗಾಗಿದ್ದು, ಈ ಗೊಂದಲಗಳನ್ನು ನಿವಾರಿಸಿ ದೃಢೀಕರಣ ಪತ್ರ ಸಮರ್ಪಕವಾಗಿ ನೀಡಲು ಸರ್ಕಾರ ಏನೇನು ಕ್ರಮ ಕೈಗೊಳ್ಳಲಿದೆ ?

## ಬೆಳಗಾವಿ ಜಿಲ್ಲೆಯ ಏತ ನೀರಾವರಿ ಯೋಜನೆಗಳು

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೪೪ (೨೪೬೭) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಳಗಾವಿ ಜಿಲ್ಲೆಯಲ್ಲಿ ಯಾವ ಯಾವ ಜಲಾಶಯಗಳಿಂದ ಎಷ್ಟು ಏತ ನೀರಾವರಿ ಯೋಜನೆಗಳನ್ನು ಪ್ರಾರಂಭಿಸಲಾಗಿದೆ;

(ಆ) ಎಷ್ಟು ಏತ ನೀರಾವರಿ ಯೋಜನೆಗಳು ಪೂರ್ಣಗೊಂಡಿವೆ;

(ಇ) ಅಪೂರ್ಣಗೊಂಡಿರುವ ಏತ ನೀರಾವರಿ ಯೋಜನೆಗಳ ಬಗ್ಗೆ ಮಾಹಿತಿ ನೀಡುವುದು; ಅಪೂರ್ಣಗೊಂಡ ಏತ ನೀರಾವರಿ ಯೋಜನೆಗಳ ವಿಳಂಬಕ್ಕೆ ಕಾರಣ ನೀಡುವುದು ?

## ಕಾಡುಗಳಲ್ಲಿ ಕಾಳ್ಗಿಚ್ಚು ಉಂಟಾಗುತ್ತಿರುವ ಬಗ್ಗೆ

**ಶ್ರೀ ಲಹರ್‌ಸಿಂಗ್ ಸಿರೋಯಾ (ನಾಮನಿರ್ದೇಶನ ಹೊಂದಿದವರು) –**

೨೪೫ (೨೫೫೬) ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ವಿವಿಧ ಭಾಗಗಳಲ್ಲಿ ಬೇಸಿಗೆ ಸಮಯದಲ್ಲಿ ಕಾಳ್ಗಿಚ್ಚು ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದರೆ, ಕಳೆದ ೫ ವರ್ಷಗಳಲ್ಲಿ ಯಾವ ಯಾವ ಪ್ರದೇಶದ ಅರಣ್ಯ ಭಾಗಗಳಲ್ಲಿ ಕಾಳ್ಗಿಚ್ಚು ಹರಡಿರುವುದು ವರದಿಯಾಗಿದೆ; ನಂದಿಸಲು ಕೈಗೊಂಡ ಕ್ರಮಗಳ ವಿವರ ನೀಡುವುದು;

(ಇ) ಕಾಳ್ಗಿಚ್ಚು ಪ್ರಕರಣಗಳು ನೈಸರ್ಗಿಕವಾಗಿ ಘಟಿಸುತ್ತಿದೆಯೋ ಅಥವಾ ಕಿಡಿಗೇಡಿಗಳ ಕೈವಾಡ ಇದೆಯೇ; (ವಿವರ ನೀಡುವುದು)

(ಈ) ಕಳೆದ ೫ ವರ್ಷಗಳಲ್ಲಿ ಕಾಳ್ಗಿಚ್ಚು ಸಂಬಂಧ ಎಷ್ಟು ಜನರ ಮೇಲೆ ಪ್ರಕರಣ ದಾಖಲು ಮಾಡಲಾಗಿದೆ; ಇವರ ಹಿನ್ನೆಲೆಯ ವಿವರ ನೀಡುವುದು;

(ಉ) ಈ ಪ್ರಕರಣಗಳ ವಿಚಾರಣೆ ಯಾವ ಹಂತದಲ್ಲಿದೆ; ಆರೋಪಿಗಳ ಮೇಲೆ ಕ್ರಮ ಕೈಗೊಳ್ಳಲಾಗಿದೆಯೇ; (ವಿವರ ನೀಡುವುದು)

(ಊ) ಇಂತಹ ಕಾಳ್ಗಿಚ್ಚು ಪ್ರಕರಣಗಳಿಂದ ಕಳೆದ ೫ ವರ್ಷಗಳಲ್ಲಿ ಇಲಾಖೆಗೆ, ಸರ್ಕಾರಕ್ಕೆ ಉಂಟಾದ ನಷ್ಟವೆಷ್ಟು ? (ವಿವರ ನೀಡುವುದು)

## ಅನುದಾನಿತ ಹಾಗೂ ಅನುದಾನ ರಹಿತ ಕಿರಿಯ, ಹಿರಿಯ ಪ್ರಾಥಮಿಕ ಶಾಲೆ ಮತ್ತು ಪ್ರೌಢಶಾಲೆಗಳ ಆಟದ ಮೈದಾನಕ್ಕೆ ಹಣ ಬಿಡುಗಡೆ ಮಾಡುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –**

೨೪೬ (೨೪೩೨) ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಅನುದಾನಿತ ಹಾಗೂ ಅನುದಾನ ರಹಿತ ಕಿರಿಯ ಪ್ರಾಥಮಿಕ, ಹಿರಿಯ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಯುವಜನ ಸೇವೆ ಮತ್ತು ಕ್ರೀಡಾ ಇಲಾಖೆಯಿಂದ ಆಟದ ಮೈದಾನ, ವಗೈರೆ ಕೆಲಸಗಳಿಗೆ ಸರ್ಕಾರದ ವತಿಯಿಂದ ಸಿಗುತ್ತಿರುವ ಸಹಾಯ ಸೌಲಭ್ಯಗಳಾವುವು;

(ಆ) ಈ ಶಾಲೆಗಳಿಗೆ ಕೇಂದ್ರ ಸರ್ಕಾರದಿಂದ ಯಾವ ರೀತಿಯ ಸಹಾಯ ದೊರೆಯುತ್ತಿದೆ;

(ಇ) ಶಾಲೆಯವರು ಸಹಾಯ ತೆಗೆದುಕೊಳ್ಳಲು ಯಾರನ್ನು ಸಂಪರ್ಕಿಸಬೇಕು; ಹಾಗೂ ಎಷ್ಟು ಮೊತ್ತದವರೆಗೆ ಸಹಾಯ ಒದಗಿಸಲಾಗುವುದು;

(ಈ) ಕ್ರೀಡಾ ಇಲಾಖೆಯಿಂದ ಈ ಶಾಲೆಗಳಿಗೆ ಯಾವ–ಯಾವ ರೀತಿಯ ಸಹಾಯ ಒದಗಿಸಲಾಗುವುದು; ಹಾಗೂ ಯಾರನ್ನು ಸಂಪರ್ಕಿಸಬೇಕು;

(ಉ) ೨೦೧೪ ಮತ್ತು ೨೦೧೫ರಲ್ಲಿ ಬೆಳಗಾವಿ, ಬಾಗಲಕೋಟೆ ಹಾಗೂ ವಿಜಯಪುರ ಜಿಲ್ಲೆಗಳಲ್ಲಿ ಯಾವ–ಯಾವ ಶಾಲೆಗಳಿಗೆ ಸಹಾಯ ಮಾಡಲಾಗಿದೆ ? (ವಿವರ ನೀಡುವುದು)

## ಮತ್ಸ್ಯಾಶ್ರಯ ಸೇರಿದಂತೆ ವಿವಿಧ ಯೋಜನೆಗಳಲ್ಲಿ ವಸತಿ

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೪೭ (೨೫೨೦) ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ೨ ವರ್ಷಗಳಲ್ಲಿ ಮತ್ಸ್ಯಾಶ್ರಯ ಸೇರಿದಂತೆ ವಿವಿಧ ಯೋಜನೆಗಳಲ್ಲಿ ವಸತಿ ರಹಿತ ಮೀನುಗಾರರಿಗೆ ಮಂಜೂರಾದ ಮನೆಗಳ ಸಂಖ್ಯೆ ಎಷ್ಟು; ಈ ಮನೆಗಳಿಗೆ ಆಯ್ಕೆ ಮಾಡಲಾದ ಫಲಾನುಭವಿಗಳ ಸಂಖ್ಯೆ ಎಷ್ಟು; ಆಯ್ಕೆ ಮಾಡದೇ ಬಾಕಿ ಉಳಿದಿರುವ ಮನೆಗಳ ಸಂಖ್ಯೆ ಎಷ್ಟು; (ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು)

(ಆ) ಆಯ್ಕೆ ಮಾಡಲು ಬಾಕಿ ಉಳಿದಿದ್ದರೆ, ಕಾರಣಗಳೇನು;

(ಇ) ಬಾಕಿ ಮನೆಗಳಿಗೆ ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಿ, ಕಾರ್ಯಕ್ರಮದ ಅನುಷ್ಠಾನ ಯಾವಾಗ ಮಾಡಲಾಗುವುದು ?

## ಭಾರಿ ಮತ್ತು ಮಧ್ಯಮ ನೀರಾವರಿ ಇಲಾಖೆಯ ಯೋಜನೆಗಳು

**ಶ್ರೀ ವೈ.ಎ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೨೪೮ (೨೪೮೫) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕ ರಾಜ್ಯದಲ್ಲಿ ೨೦೧೩–೨೦೧೪ ಹಾಗೂ ೨೦೧೪–೧೫ನೇ ಸಾಲಿನಲ್ಲಿ ಭಾರಿ ಮತ್ತು ಮಧ್ಯಮ ನೀರಾವರಿ ಇಲಾಖೆಗೆ ಬಿಡುಗಡೆ ಮಾಡಲಾದ ಹಣ ಎಷ್ಟು; ಹಾಗೂ ಖರ್ಚು ಮಾಡಲಾದ ಹಣ ಎಷ್ಟು;

(ಆ) ಈ ಹಣದಲ್ಲಿ ಮಧ್ಯ ಕರ್ನಾಟಕದ ನೀರಾವರಿ ಯೋಜನೆಗಳಿಗೆ ಹಾಗೂ ಬಯಲುಸೀಮೆ ನೀರಾವರಿ ಯೋಜನೆಗಳಿಗೆ ಖರ್ಚು ಮಾಡಲಾದ ನಿಖರವಾದ ಮೊತ್ತ ಎಷ್ಟು;

(ಇ) ಖರ್ಚು ಮಾಡಲಾದ ಈ ಮೊತ್ತದಲ್ಲಿ ಬಯಲುಸೀಮೆ ಜಿಲ್ಲೆಗಳಲ್ಲಿ ಕೈಗೆತ್ತಿಕೊಂಡಿರುವ ಯೋಜನೆಗಳು ಯಾವುವು;

(ಈ) ಇದೇ ವೇಗದಲ್ಲಿ ಇಲಾಖೆ ನಿರ್ವಹಿಸಿದರೆ ಇನ್ನೂ ಎಷ್ಟು ವರ್ಷಗಳಲ್ಲಿ ಬಯಲುಸೀಮೆ ಜಿಲ್ಲೆಗಳಿಗೆ ನೀರು ತರಲು ಸಾಧ್ಯ;

(ಉ) ಬಯಲುಸೀಮೆ ಜಿಲ್ಲೆಗಳಿಗೆ ಶಾಶ್ವತವಾಗಿ ನೀರು ತರಲು ರೂಪಿಸಿರುವ ಯೋಜನೆಗಳು ಯಾವುವು ? (ಯೋಜನವಾರು ಅಂದಾಜು ಮೊತ್ತ, ಅನುಷ್ಠಾನಗೊಂಡ ಹಾಗೂ ಅನುಷ್ಠಾನಗೊಳಿಸಬೇಕಾದ ಯೋಜನೆಗಳ ಸಮಗ್ರ ವಿವರ ನೀಡುವುದು)

## ಸಂಘ–ಸಂಸ್ಥೆಗಳಿಗೆ ಸರ್ಕಾರಿ ಭೂಮಿಯನ್ನು ಮಂಜೂರು ಮಾಡಿರುವ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) –**

೨೪೯ (೨೫೦೦) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ನಗರ ಹಾಗೂ ಬೆಂಗಳೂರು ಗ್ರಾಮಾಂತರ ಪ್ರದೇಶ ಸೇರಿದಂತೆ ಕರ್ನಾಟಕ ರಾಜ್ಯದಲ್ಲಿ ಕಳೆದ ಹತ್ತು ವರ್ಷಗಳಿಂದ ಯಾವ ಯಾವ ಸಂಸ್ಥೆಗಳಿಗೆ ಎಷ್ಟೆಷ್ಟು ಸರ್ಕಾರಿ ಭೂಮಿಯನ್ನು ಮಂಜೂರು ಮಾಡಲಾಗಿದೆ; (ಸಂಸ್ಥೆಯ ಹೆಸರು ಹಾಗೂ ವಿಳಾಸ, ಭೂಮಿಯ ವಿಸ್ತೀರ್ಣ, ಉದ್ದೇಶ ಮತ್ತು ಮಂಜೂರು ಮಾಡಿರುವ ವಿಧ ಅಂದರೆ ಕ್ರಯ ಅಥವಾ ಗುತ್ತಿಗೆ, ಗುತ್ತಿಗೆಯಾಗಿದ್ದಲ್ಲಿ, ಅದರ ಅವಧಿಯೊಂದಿಗೆ ಸಂಪೂರ್ಣ ವಿವರ ನೀಡುವುದು)

(ಆ) ಯಾವ ಉದ್ದೇಶಕ್ಕಾಗಿ ಭೂಮಿಯನ್ನು ಮಂಜೂರು ಮಾಡಲಾಗಿದೆ; ಅಂತಹ ಉದ್ದೇಶಕ್ಕಾಗಿ ಸದರಿ ಭೂಮಿಯನ್ನು ಬಳಸಲಾಗುತ್ತಿದೆಯೇ; ಇಲ್ಲದಿದ್ದಲ್ಲಿ, ಅಂತಹ ಸಂಸ್ಥೆಗಳ ಮೇಲೆ ಸರ್ಕಾರವು ಯಾವ ಕ್ರಮ ಕೈಗೊಂಡಿದೆ; (ಸಂಸ್ಥೆಗಳ ಹೆಸರು ವಿಳಾಸದೊಂದಿಗೆ ಸಂಪೂರ್ಣ ವಿವರ ನೀಡುವುದು)

(ಇ) ಧಾರ್ಮಿಕ ಸಂಸ್ಥೆಗಳಿಗೆ ಹಾಗೂ ಮಠ ಮಾನ್ಯಗಳಿಗೆ ಕಳೆದ ೧೦ ವರ್ಷಗಳಿಂದ ಎಷ್ಟೆಷ್ಟು ಭೂಮಿಯನ್ನು ಮಂಜೂರು ಮಾಡಲಾಗಿದೆ ? (ಯಾವ ಯಾವ ಪಂಗಡದ ಮಠಗಳಿಗೆ ಎಷ್ಟೆಷ್ಟು ಭೂಮಿ ಮಂಜೂರು ಮಾಡಿದೆ; ಸಂಪೂರ್ಣ ವಿವರ ನೀಡುವುದು)

## ಅರಣ್ಯ ಪ್ರದೇಶಗಳ ಸಂರಕ್ಷಣೆ ಮತ್ತು ಸಿಬ್ಬಂದಿ ನೇಮಕ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –**

೨೫೦ (೨೫೦೮) ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿರುವ ಘೋಷಿತ ಅರಣ್ಯ ಪ್ರದೇಶ ಎಷ್ಟು ; (ಜಿಲ್ಲಾವಾರು ವಿಸ್ತೀರ್ಣದ ವಿವರ ನೀಡುವುದು)

(ಆ) ಅರಣ್ಯ ಉತ್ಪನ್ನಗಳನ್ನು ಕಳ್ಳರಿಂದ ಹಾಗೂ ಬೆಂಕಿಯಿಂದ ಸಂರಕ್ಷಿಸಲು ನಿಯೋಜಿಸಿರುವ ಸಿಬ್ಬಂದಿ ಎಷ್ಟು; ಇದನ್ನು ಸಂರಕ್ಷಿಸಲು ರೂಪಿಸಿರುವ ಕಾರ್ಯಕ್ರಮಗಳೇನು;

(ಇ) ಅರಣ್ಯ ಸಂರಕ್ಷಿಸಲು ಮಂಜೂರು ಮಾಡಿರುವ ಹುದ್ದೆಗಳ ಸಂಖ್ಯೆ ಎಷ್ಟು; ಹಾಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು;

(ಈ) ಕಳೆದ ಒಂದು ವರ್ಷದಿಂದ ಕಿಡಿಗೇಡಿಗಳಿಂದ ಬೆಂಕಿಯಿಂದ ನಾಶವಾದ ಅರಣ್ಯ ಪ್ರದೇಶ ಎಷ್ಟು; ನಾಶವಾಗಿರುವ ಅರಣ್ಯ ಉತ್ಪನ್ನದ ಮೌಲ್ಯ ಎಷ್ಟು ? (ವಿವರ ನೀಡುವುದು)

## ಮಿನಿ ವಿಧಾನಸೌಧ ನಿರ್ಮಾಣ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೨೫೧ (೨೪೯೩) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ತಾಂಡಾ, ಗೊಲ್ಲರಹಟ್ಟಿ ಹಾಗೂ ಇತರ ಹ್ಯಾವೆಲ್ಸ್‌ಗಳನ್ನು ಕಂದಾಯ ಗ್ರಾಮಗಳನ್ನಾಗಿ ಘೋಷಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗೂ ರಾಯಚೂರು ಜಿಲ್ಲೆಯಲ್ಲಿರುವ ತಾಂಡಾ, ಗೊಲ್ಲರಹಟ್ಟಿ ಹಾಗೂ ಇತರೆ ಹ್ಯಾವೆಲ್ಸ್‌ಗಳನ್ನು ಕಂದಾಯ ಗ್ರಾಮಗಳನ್ನಾಗಿ ಘೋಷಿಸುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು; (ಪೂರ್ಣ ವಿವರ ಒದಗಿಸುವುದು)

(ಆ) ಮಾನ್ವಿ ಪಟ್ಟಣದಲ್ಲಿ ಮಿನಿ ವಿಧಾನಸೌಧ ಕಟ್ಟಡ ನಿರ್ಮಾಣಕ್ಕೆ ಮಂಜೂರಾತಿ ನೀಡುವ ಪ್ರಸ್ತಾಪ ಯಾವ ಹಂತದಲ್ಲಿದೆ;

(ಇ) ಹಾಗಿದ್ದಲ್ಲಿ, ಮಾನ್ವಿ ಪಟ್ಟಣದಲ್ಲಿ ಮಿನಿ ವಿಧಾನಸೌಧ ಕಟ್ಟಡ ನಿರ್ಮಾಣಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ? (ಪೂರ್ಣ ವಿವರ ಒದಗಿಸುವುದು)

## ಕೆರೆ ಅಭಿವೃದ್ಧಿ, ನಾಡಿನ ಶ್ರೇಯೋಭಿವೃದ್ಧಿ ಕಾರ್ಯಕ್ರಮ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೫೨ (೨೪೨೬) ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೆರೆಗಳ ಅಭಿವೃದ್ಧಿಗಾಗಿ "ಕೆರೆ ಅಭಿವೃದ್ಧಿ, ನಾಡಿನ ಶ್ರೇಯೋಭಿವೃದ್ಧಿ" ಎಂಬ ಕಾರ್ಯಕ್ರಮವನ್ನು ಸರ್ಕಾರ ಜಾರಿಗೆ ತಂದಿದೆಯೇ;

(ಆ) ಹಾಗಿದ್ದಲ್ಲಿ, ಈ ಯೋಜನೆಯಡಿ ೨೦೧೪–೧೫ನೇ ಸಾಲಿನಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಎಷ್ಟು ಕೆರೆಗಳನ್ನು ಅಭಿವೃದ್ಧಿಪಡಿಸಲಾಗಿದೆ; (ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು)

(ಇ) ಇದಕ್ಕಾಗಿ ಬೆಳಗಾವಿ ಜಿಲ್ಲೆಗೆ ಸರ್ಕಾರವು ಎಷ್ಟು ಅನುದಾನ ಬಿಡುಗಡೆಗೊಳಿಸಲಾಗಿದೆ; ಹಾಗೂ ಅದರಲ್ಲಿ ಎಷ್ಟು ಅನುದಾನ ಸದ್ಬಳಕೆಯಾಗಿದೆ ? (ಸಂಪೂರ್ಣ ವಿವರ ನೀಡುವುದು)

## ಕರ್ನಾಟಕ ಮೇಲ್ಮನವಿ ಪ್ರಾಧಿಕಾರದ ಕ್ಯಾಂಪುಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೫೩ (೨೪೯೮) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕ ಮೇಲ್ಮನವಿ ಪ್ರಾಧಿಕಾರದ ಕ್ಯಾಂಪುಗಳು ರಾಜ್ಯ ಯಾವ ಯಾವ ಭಾಗದಲ್ಲಿ ಕಾರ್ಯನಿರ್ವಹಿಸುತ್ತಿವೆ; ಮತ್ತು ಇವುಗಳಲ್ಲಿ ಒಟ್ಟು ನಡೆದ ಬೈಠಾಕುಗಳ ಸಂಖ್ಯೆ ಎಷ್ಟು;

(ಆ) ೨೦೧೦ರಿಂದ ಮಂಗಳೂರಿನಲ್ಲಿ ಕರ್ನಾಟಕ ಮೇಲ್ಮನವಿ ಪ್ರಾಧಿಕಾರವು ಬೈಠಾಕುಗಳನ್ನು ನಡೆಸದಿರುವುದನ್ನು ಸರ್ಕಾರ ಗಮನಿಸಿದೆಯೇ; ಗಮನಿಸಿದ್ದಲ್ಲಿ, ಪುನಃ ಮರು ಪ್ರಾರಂಭಿಸಲಾಗುವುದೇ; ಇಲ್ಲವಾದಲ್ಲಿ, ಕಾರಣವೇನು;

(ಇ) ಮಂಗಳೂರಿನಲ್ಲಿರುವ ಮೇಲ್ಮನವಿ ಪ್ರಾಧಿಕಾರದ ಕ್ಯಾಂಪ್‌ಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲಾಗಿದೆಯೇ; ಇಲ್ಲದಿದ್ದಲ್ಲಿ, ಕಲ್ಪಿಸಲು ಕೈಗೊಳ್ಳುವ ಕ್ರಮಗಳೇನು ?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯ ಕ್ರೀಡಾಂಗಣ

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೫೪ (೨೪೫೭) ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಇರುವ ಕ್ರೀಡಾಂಗಣಗಳು ಎಷ್ಟು;

(ಆ) ಈ ಕ್ರೀಡಾಂಗಣಗಳು ತಾಲ್ಲೂಕು ಮಟ್ಟದಲ್ಲಿ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಈ ತಾಲ್ಲೂಕು ಮಟ್ಟದ ಕ್ರೀಡಾಂಗಣ ಸ್ಥಾಪನೆಗಾಗಿ ಸರ್ಕಾರ ಕ್ರಮ ಕೈಗೊಳ್ಳುವುದೇ;

(ಈ) ಈ ಜಿಲ್ಲಾ ಕ್ರೀಡಾಂಗಣಗಳಿಗೆ ನಿರ್ವಹಣೆ ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಕಣ್ವ ಜಲಾಶಯಕ್ಕೆ ನೀರು ಹಾಯಿಸುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೨೫೫ (೨೫೦೩) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಣ್ವ ಜಲಾಶಯಕ್ಕೆ ಅಣೆಕಟ್ಟನ್ನು ನಿರ್ಮಿಸಿದ್ದು ಯಾವಾಗ; ಸದರಿ ಅಣೆಕಟ್ಟಿನ ನಿರ್ಮಾಣಕ್ಕೆ ತಗುಲಿದ ಮೊತ್ತ ಎಷ್ಟು; ಈ ಅಣೆಕಟ್ಟಿನಿಂದ ಎಷ್ಟು ಎಕರೆ ಜಮೀನಿಗೆ ಮತ್ತು ಎಷ್ಟು ರೈತರಿಗೆ ಅನುಕೂಲವಾಗಿದೆ; ಈಗ ಈ ಅಣೆಕಟ್ಟೆಯ ಸ್ಥಿತಿ ಹಾಗೂ ನೀರಿನ ಮಟ್ಟ ಹೇಗಿದೆ;

(ಆ) ಈ ಅಣೆಕಟ್ಟಿನಲ್ಲಿ ನೀರಿಲ್ಲದೆ ಬರಿದಾಗಿ ರೈತರು ಕಂಗಾಲಾಗಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ;

(ಇ) ಕಾವೇರಿ ನದಿ ಹೊರ ಹರಿವಿನ ನೀರನ್ನು ಈ ಜಲಾಶಯಕ್ಕೆ ಹಾಯಿಸಲು ಸಾಧ್ಯವಿಲ್ಲವೇ; ಈ ಕುರಿತು ಸರ್ಕಾರದ ಮುಂದಿರುವ ಸವಾಲುಗಳೇನು ಹಾಗೂ ಕ್ರಮಗಳೇನು;

(ಈ) ಈ ಅಣೆಕಟ್ಟಿನಲ್ಲಿ ಸದಾ ನೀರು ತುಂಬಿಸಿಟ್ಟು ಸಾವಿರಾರು ಎಕರೆ ಹಾಗೂ ಸಾವಿರಾರು ರೈತರಿಗೆ ಅನುಕೂಲ ಕಲ್ಪಿಸಿಕೊಡುವ ಮಹಾ ಯೋಜನೆಯೊಂದನ್ನು ರೂಪಿಸಲು ಸರ್ಕಾರ ಮುಂದಾಗುವುದೇ ?

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಪಿ7, ಕಾ.ಸೂ. 1246, ಪ್ರತಿಗಳು 1500